**2** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.

<u>ಸಿ.ಸಿ.ನಂ. **146/2023**</u>

ದಿನಾಂಕಃ **16.03.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ಬಸವರಾಜಪ್ಪ | ಚಾಸಾ-1, ಪ್ರಾಸ.-1 |
| ತಂದೆಯ ಹೆಸರುಃ | ಪರಮೇಶ್ವರಪ್ಪ | |
| ವಯಸ್ಸು ಃ | 68 ವರ್ಷ | |
| ಉದ್ಯೋಗ ಃ | ವ್ಯವಸಾಯ | |
| ವಾಸ ಃ | ತಿಮ್ಮಾಪುರ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ಆರೋಪಿತರು ಗೊತ್ತು ಅವರು ನಮ್ಮ ಊರಿನವರು. ಆರೋಪಿತರು ಅವ್ಯಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ಕೊಲೆ ಬೆದರಿಕೆ ಹಾಕಿರುವುದಿಲ್ಲ. ಕೈಗಳಿಂದ ಮತ್ತು ದೊಣ್ಣೆಯಿಂದ ಹಲ್ಲೆ ಮಾಡಿರುವುದಿಲ್ಲ. ನನ್ನ ಶರ್ಟನ್ನು ಹರಿದು ಹಾಕಿರುವುದಿಲ್ಲ. ಈ ಸಂಬಂಧ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿರುವುದಿಲ್ಲ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಪೋಲಿಸರಿಗೆ ಹೇಳಿಕೆ ನೀಡಿರುವುದಿಲ್ಲ. ನನ್ನ ಸಮಕ್ಷಮ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ನಾನು ಪೋಲಿಸರಿಗೆ ಮರು ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ದಿಃ 21.10.2022 ರಂದು ಆಸ್ಪತ್ರೆಯಲ್ಲಿ ನೀಡಿರುವ ಹೇಳಿಕೆಯಲ್ಲಿರುವ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ದಿಃ 22.10.2022 ರ ಮಹಜರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ತೆಗೆಯಲಾದ ಛಾಯಾಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಸಾಕ್ಷಿ ನ್ಯಾಯಾಲಯದ ಮುಂದಿರುವ ಮುಮಾ ಗಳನ್ನು ನೋಡಿ ಗುರುತಿಸಿರುವುದಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 21.10.2022 ರಂದು ನಾನು ಗಿರಿಯಪ್ಪ ರವರ ಮನೆಯ ಮುಂದೆ ಸ್ಕೂಟರನ್ನು ನಿಲ್ಲಿಸಿದ ಕಾರಣ ಆರೋಪಿಯು ಅವ್ಯಾಚ್ಯವಾಗಿ ಬೈದು ಸ್ಕೂಟರನ್ನು ಕಾಲಿನಿಂದ ಒದ್ದು ಕೆಳಗೆ ಕೆಡವಿರುತ್ತಾನೆ ಎಂದರೆ ಸರಿಯಲ್ಲ. ನಾನು 1 ನೇ ಆರೋಪಿಯನ್ನು ಉದ್ದೇಶಿಸಿ ಸ್ಕೂಟರ್ ಸ್ಟಾರ್ಟ ಆಗಿದೇ ಇರುವ ಕಾರಣ ಅದನ್ನು ಅಲ್ಲಿ ನಿಲ್ಲಿಸಿ ಹೋಗಿದ್ದೆ ನನ್ನ ಬಳಿ ಹೇಳಿದ್ದಲ್ಲಿ ನಾನು ಅದನ್ನು ತೆಗೆಯುತ್ತಿದ್ದೆ ಯಾಕೆ ಕಾಲಿನಿಂದ ಒದ್ದು ಕೆಡವಿದೆ ಎಂದು ಕೇಳಿದಾಗ 1 ನೇ ಆರೋಪಿಯು ಅವ್ಯಾಚ್ಯವಾಗಿ ಬೈದು ಅಲ್ಲೇ ಬಿದ್ದಿದ್ದ ನ್ಯಾಯಾಲಯದ

ಮುಂದಿರುವ ಬಿದಿರಿನ ದೊಣ್ಣೆಯನ್ನು ತೆಗೆದುಕೊಂಡು ನನ್ನ ಎಡಕೈ ಭುಜಕ್ಕೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಕೈಯಿಂದ ಬಾಯಿಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಅಲ್ಲಿಗೆ ಬಂದ 2 ಮತ್ತು 3 ನೇ ಆರೋಪಿತರು 1 ನೇ ಆರೋಪಿಯೊಂದಿಗೆ ಸೇರಿ ಕೆಟ್ಟದಾಗಿ ಬೈದು ಕೈಯಿಂದ ಮೈಕೈಗೆ ಹೊಡೆದು ನಾನು ಧರಿಸಿದ್ದ ಅಂಗಿಯನ್ನು ಹರಿದುಹಾಕಿ ಆರೋಪಿತರೆಲ್ಲರೂ ಸೇರಿ ನನಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ನಿಪಿ-1 ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ದೂರಿಗೆ ಸಂಬಂಧಿಸಿದಂತೆ ದಿಃ 22.10.2022 ರಂದು ಬೆಳಗ್ಗೆ 11.40 ರಿಂದ 12.10 ರವರೆಗೆ ನಾನು ತೋರಿಸಿದ ಸ್ಥಳದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿ ನ್ಯಾಯಾಲಯದ ಮುಂದಿರುವ ಅಂಗಿ ಮತ್ತು ದೊಣ್ಣೆಯನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-3 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧ ದಿಃ 28.10.2022 ರಂದು ಈಗ ಓದಿ ಹೇಳಿರುವಂತೆ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.